ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಪರಿಸರ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ — ದಿನಾಂಕ : DATE : 29/02/2020

# ಶೀಘ್ರ ಮಹ ಕೆಲಸ ಆರಂಭ

ಉ.ವಾ 29/2/20

## ಬಜೆಟ್‌ನಲ್ಲಿ ಹಣ ಮೀಸಲು: ಸಿಎಂ

**ಬೆಂಗಳೂರು:** ಈಗಾಗಲೇ ಮಹದಾಯಿ ನದಿ ವಿವಾದ ವಿಚಾರದಲ್ಲಿ ಕೇಂದ್ರ ಸರ್ಕಾರದ ಕಡೆಯಿಂದ ಸಿಹಿ ಸುದ್ದಿ ಪಡೆದಿರುವ ರಾಜ್ಯ ಸರ್ಕಾರ, ಶೀಘ್ರದಲ್ಲೇ ಕಾಮಗಾರಿ ಆರಂಭಿಸುವ ಭರವಸೆ ನೀಡಿದೆ.


ಮಹದಾಯಿ ಗೆಜೆಟ್ ಅಧಿಸೂಚನೆ ಸಂಬಂಧ ಶುಕ್ರವಾರ ಪ್ರತಿಕ್ರಿಯೆ ನೀಡಿರುವ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು, ಬಜೆಟ್‌ನಲ್ಲಿಯೇ ಹೆಚ್ಚಿನ ಅನುದಾನ ಮೀಸಲಿಟ್ಟು ತಕ್ಷಣ ಕೆಲಸ ಆರಂಭಿಸುವುದಾಗಿ ಹೇಳಿದ್ದಾರೆ. ಅತ್ತ, ಜಲ ಸಂಪನ್ಮೂಲ ಸಚಿವ ರಮೇಶ್ ಜಾರಕಿಹೊಳಿ ಅವರು, ಶೀಘ್ರದಲ್ಲೇ ಟೆಂಡರ್ ಕರೆದು ಯೋಜನೆ ಕಾಮಗಾರಿ ಆರಂಭಿಸಲಾಗುವುದು ಎಂದು ತಿಳಿಸಿದ್ದಾರೆ. ಹೀಗಾಗಿ, ಮಹದಾಯಿ ಯೋಜನೆ ಕಾಮಗಾರಿ ಚುರುಕು ಪಡೆದುಕೊಂಡಿದೆ.

**ಸಿಎಂ ಹೇಳಿದ್ದೇನು?:** ಮಹದಾಯಿ ಗೆಜೆಟ್ ಅಧಿಸೂಚನೆಯಿಂದಾಗಿ ಕಳಸಾ ಬಂಡೂರಿ ನಾಲೆಗಳ ಮೂಲಕ ರಾಜ್ಯಕ್ಕೆ 13.5 ಟಿಎಂಸಿಯಷ್ಟು ಮಹದಾಯಿ ನೀರು ಲಭ್ಯವಾಗಲಿದೆ. ಆದಷ್ಟು ಬೇಗ ಯೋಜನೆ ಪೂರ್ಣಗೊಳಿಸಲು ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ ಎಂದು ಸಿಎಂ ಹೇಳಿದರು.

**400 ಕೋಟಿಗೆ ಪ್ರಹ್ಲಾದ್ ಜೋಷಿ ಮನವಿ:** ಮಹದಾಯಿ ಯೋಜನೆಯ ಪೂರಕ ಕಾಮಗಾರಿಗಳಿಗೆ ಮುಂದಿನ ಆಯವ್ಯಯದಲ್ಲಿ 400 ಕೋಟಿ ರೂ. ಅನುದಾನ ಕಾಯ್ದಿರಿಸುವಂತೆ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಅವರು ಸಿಎಂಗೆ ಮನವಿ ಮಾಡಿದ್ದಾರೆ. ಇದಕ್ಕೆ ಮುಖ್ಯಮಂತ್ರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ.

**ಶೀಘ್ರದಲ್ಲೇ ಟೆಂಡರ್:** ಶೀಘ್ರದಲ್ಲೇ ಟೆಂಡರ್ ಕರೆದು ಯೋಜನೆ ಕಾಮಗಾರಿ ಆರಂಭಿಸಲಾಗುವುದು ಎಂದು ಜಲ ಸಂಪನ್ಮೂಲ ಸಚಿವ ರಮೇಶ್ ಜಾರಕಿಹೊಳಿ ಹೇಳಿದ್ದಾರೆ. ಆದಷ್ಟು ಬೇಗ ಕಾಮಗಾರಿ ಆರಂಭಿಸುತ್ತೇವೆ. ಕಳಸಾ ಬಂಡೂರಿ ಯೋಜನೆಯ ಡಿಪಿಆರ್ ಸಿದ್ಧವಿದೆ. ಅದನ್ನು ನ್ಯಾಯಾಧಿಕರಣಕ್ಕೆ ತೋರಿಸಿ ಶೀಘ್ರ ಕಾಮಗಾರಿ ಆರಂಭಿಸಲಾಗುತ್ತದೆ ಎಂದು ಹೇಳಿದರು.

ಮಹದಾಯಿ ನದಿಯಲ್ಲಿ 188 ಟಿಎಂಸಿ ನೀರು ಲಭ್ಯವಿದ್ದು ಕರ್ನಾಟಕಕ್ಕೆ 13.42 ಟಿಎಂಸಿ ನೀರು ಸಿಕ್ಕಿದೆ. ನ್ಯಾಯಾಧಿಕರಣದ ಮುಂದೆ 36.55 ಟಿಎಂಸಿ ನೀರಿನ ಹಂಚಿಕೆಗಾಗಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲಾಗಿದೆ. ಈ ಕುರಿತಂತೆ ಕೋರ್ಟ್‌ನಲ್ಲಿ ಕಾನೂನು ಹೋರಾಟ ಮುಂದುವರಿಯಲಿದೆ ಎಂದು ಹೇಳಿದರು.



### 1000 ಕೋಟಿ ಬೇಕು

ಮಹದಾಯಿ, ಕಳಸಾ-ಬಂಡೂರಿ ನಾಲಾ ಯೋಜನೆಗೆ ಕನಿಷ್ಠ 1,000 ಕೋಟಿ ರೂ. ನೀಡಿದರೆ ಕಾಮಗಾರಿ ವೇಗ ಹೆಚ್ಚಲಿದೆ ಎಂಬುದು ಅಧಿಕಾರಿಗಳ ಅನಿಸಿಕೆ. ಮಾ.5ರಂದು ಮಂಡನೆಯಾಗುವ ಆಯವ್ಯಯದಲ್ಲಿ ಸಿಎಂ ಯಡಿಯೂರಪ್ಪ ಎಷ್ಟು ಹಣ ತೆಗೆದಿರಿಸಲಿದ್ದಾರೆ ಎಂಬುದನ್ನು ಕಾದು ನೋಡಬೇಕಾಗಿದೆ.

> ಕಳಸಾ-ಬಂಡೂರಿ ಕುಡಿಯುವ ನೀರಿನ ಯೋಜನೆ ಆಗಿರುವುದರಿಂದ ಪರಿಸರ ಇಲಾಖೆಯಿಂದ ಪರಿಣಾಮದ ಅವಲೋಕನದ ವರದಿ ಅವಶ್ಯವಿಲ್ಲ. ಯಾವುದೇ ಸಮಸ್ಯೆ ಇಲ್ಲವೆಂದು ಕಾನೂನು ತಜ್ಞರು ಹೇಳಿದ್ದಾರೆ.
> • ಪ್ರಹ್ಲಾದ ಜೋಶಿ, ಕೇಂದ್ರ ಸಚಿವ

> [illegible]
> • ರಮೇಶ್ ಜಾರಕಿಹೊಳಿ, ಜಲಸಂಪನ್ಮೂಲ ಸಚಿವ

ಸರ್ಕಾರ ಕಾಮಗಾರಿ ಆರಂಭಿಸಲು ಪರಿಸರ ಇಲಾಖೆ ಹಾಗು ಅರಣ್ಯ ಇಲಾಖೆಯ ಅನುಮತಿ ಪಡೆಯಬೇಕಾಗಿದೆ ಎಂದೂ ರಮೇಶ್ ಜಾರಕಿಹೊಳಿ ಅವರು ಹೇಳಿದ್ದಾರೆ.